# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 448(546) |
| 2) | ಸದಸ್ಯರ ಹೆಸರು | : | ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) |
| 3) | ಉತ್ತರಿಸುವ ದಿನಾಂಕ | : | 09-03-2020 |
| 4) | ಉತ್ತರಿಸುವವರು | : | ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು. |

| ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಆನೆಗಳ ದಾಳಿ ನಡೆಯುತ್ತಿರುತ್ತದೆ; | ರಾಜ್ಯದ ಮೈಸೂರು, ಕೊಡಗು, ಹಾಸನ, ಚಿಕ್ಕಮಗಳೂರು, ಚಾಮರಾಜನಗರ, ರಾಮನಗರ, ತುಮಕೂರು, ಶಿವಮೊಗ್ಗ ಮತ್ತು ಕೋಲಾರ ಜಿಲ್ಲೆಗಳಲ್ಲಿ ಆನೆಗಳ ಹಾವಳಿ ನಡೆಯುತ್ತಿರುತ್ತದೆ. |
| ಆ) | ಕಳೆದ 3 ವರ್ಷಗಳಲ್ಲಿ ಆನೆಗಳ ಹಾವಳಿಯಿಂದ ಮೃತಪಟ್ಟವರ ಸಂಖ್ಯೆ ಎಷ್ಟು; ಅವರಿಗೆ ನೀಡಿರುವ ಪರಿಹಾರ ಧನ ಎಷ್ಟು; ಆಗಿರುವ ಬೆಳೆ ನಷ್ಟ ಎಷ್ಟು; ಬೆಳೆ ನಷ್ಟ ಉಂಟಾದ ರೈತರಿಗೆ ಪರಿಹಾರ ನೀಡಲಾಗಿದೆಯೇ; | ಕಳೆದ 3 ವರ್ಷದಲ್ಲಿ ಆನೆ ದಾಳಿಯಿಂದ ಉಂಟಾದ ಮಾನವ ಪ್ರಾಣ ಹಾನಿ ಪ್ರಕರಣಗಳು ಹಾಗೂ ಆನೆ ಒಳಗೊಂಡಂತೆ ಇತರ ವನ್ಯಪ್ರಾಣಿಗಳಿಂದ ಉಂಟಾದ ಬೆಳೆಹಾನಿ ಪ್ರಕರಣ ಹಾಗೂ ಪಾವತಿಸಿದ ದಯಾತ್ಮಕ ಧನದ ವಿವರ ಈ ಕೆಳಕಂಡಂತಿದೆ. (ರೂ.ಗಳಲ್ಲಿ) |

| ವರ್ಷ | ಮಾನವ ಪ್ರಾಣ ಹಾನಿ | | ಬೆಳೆನಾಶ | |
|---|---|---|---|---|
| | ಪ್ರಕರಣ ಸಂಖ್ಯೆ | ಮೊತ್ತ | ಪ್ರಕರಣ ಸಂಖ್ಯೆ | ಮೊತ್ತ |
| 2016-17 | 48 | 240,00,000.00 | 18985 | 7,05,67,426.00 |
| 2017-18 | 35 | 175,00,000.00 | 27525 | 13,69,16,590.00 |
| 2018-19 | 26 | 130,00,000.00 | 19913 | 10,28,13,410.00 |
| 2019-20 (ಡಿಸೆಂಬರ್-19ರ ವರೆಗೆ) | 34 | 177,50,000.00 | 7524 | 5,21,02,865.00 |

| ಸಂ. | ಪ್ರಶ್ನೆ | ಉತ್ತರ |
|---|---|---|
| ಇ) | ಕಾಡು ಪ್ರಾಣಿ ಮತ್ತು ಮಾನವನ ಮಧ್ಯೆ ಉಂಟಾಗುವ ಸಂಘರ್ಷಗಳನ್ನು ತಪ್ಪಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆಗಳೇನು; ಇವುಗಳನ್ನು ಎಷ್ಟರ ಮಟ್ಟಿಗೆ ಅನುಷ್ಠಾನಗೊಳಿಸಲಾಗಿದೆ? (ವಿವರ ನೀಡುವುದು) | ವನ್ಯಪ್ರಾಣಿ ಮತ್ತು ಮಾನವನ ಮಧ್ಯೆ ಉಂಟಾಗುವ ಸಂಘರ್ಷಗಳನ್ನು ತಪ್ಪಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿವೆ. |

| ಕ್ರ. ಸಂ. | ಲೆಕ್ಕಶೀರ್ಷಿಕೆ |
|---|---|
| | **ರಾಜ್ಯವಲಯ ಯೋಜನೆಗಳು** |
| 1 | 2406-02-110-0-54-ಪ್ರಾಕೃತಿಕ ವನ್ಯಜೀವಿ ಸಂರಕ್ಷಣೆ, ವನ್ಯಜೀವಿ ಆವಾಸಸ್ಥಾನಗಳ ನಿರ್ವಹಣೆ, ಮಾನವ-ವನ್ಯಪ್ರಾಣಿ ಸಂಘರ್ಷ ನಿಯಂತ್ರಣ-139-ಪ್ರಧಾನ ಕಾಮಗಾರಿಗಳು |
| 2 | 4406-01-101-0-01-ಉಪಯೋಗಿತ ರೈಲ್ವೆ ಹಳಿಗಳ ಬ್ಯಾರಿಕೇಡ್ ನಿರ್ಮಾಣದಿಂದ ಮಾನವ-ವನ್ಯ ಪ್ರಾಣಿ ಸಂಘರ್ಷ ನಿಯಂತ್ರಣ-132-ಬಂಡವಾಳ ವೆಚ್ಚಗಳು |
| | **ಕೇಂದ್ರ ಪುರಸ್ಕೃತ ಯೋಜನೆಗಳು** |
| 1 | 2406-02-110-0-02-ಹುಲಿ ಯೋಜನೆ-139-ಪ್ರಧಾನ ಕಾಮಗಾರಿಗಳು |
| 2 | 2406-02-110-0-23 ಆನೆ ಯೋಜನೆ |
| 3 | 2406-02-110-0-47 ಕೇಂದ್ರ ಪುರಸ್ಕೃತ ಸಮಗ್ರ ವನ್ಯಜೀವಿ ಆವಾಸ ಸ್ಥಾನಗಳ ಅಭಿವೃದ್ಧಿ- 139-ಪ್ರಧಾನ ಕಾಮಗಾರಿಗಳು |

ಮೇಲ್ಕಂಡ ಯೋಜನೆಗಳ ಅನುಷ್ಠಾನದಿಂದಾಗಿ ರಾಜ್ಯದಲ್ಲಿ ವನ್ಯಪ್ರಾಣಿ ಮತ್ತು ಮಾನವನ ಮಧ್ಯೆ ಉಂಟಾಗುವ ಸಂಘರ್ಷಗಳನ್ನು ಈ ಕೆಳಕಂಡ ಕಾಮಗಾರಿಗಳನ್ನು ಕೈಗೊಳ್ಳುವ ಮುಖಾಂತರ ತಡೆಯಲಾಗುತ್ತಿದೆ.

1) ಸೌರಶಕ್ತಿ ಬೇಲಿ ನಿರ್ಮಾಣ/ ನಿರ್ವಹಣೆ.
2) ಆನೆ ತಡೆ ಕಂದಕ ನಿರ್ಮಾಣ/ನಿರ್ವಹಣೆ.
3) ವನ್ಯಪ್ರಾಣಿಗಳಿಗೆ ಕುಡಿಯುವ ನೀರಿಗಾಗಿ ಕೆರೆಗಳ ನಿರ್ಮಾಣ/ನಿರ್ವಹಣೆ.
4) ಬೇಟೆ ತಡೆ ಶಿಬಿರ ಹಾಗೂ ಕ್ಷಿಪ್ರ ಸ್ಪಂದನ ಪಡೆ (Rapid Response Teams) ತಂಡಗಳಿಗೆ ನಿಸ್ತಂತು ಮೂಲಕ ಮಾಹಿತಿ ಸಂವಹನ ಮಾಡಲಾಗುತ್ತಿದೆ.
5) ವನ್ಯಪ್ರಾಣಿಗಳ ಹಾವಳಿಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ರೈಲ್ವೆ ಹಳಿಗಳನ್ನು ಉಪಯೋಗಿಸಿ ಬ್ಯಾರಿಕೇಡ್ ನಿರ್ಮಿಸುವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ.
6) ವನ್ಯಪ್ರಾಣಿಗಳ ಚಲನ-ವಲನದ ಮಾಹಿತಿಯನ್ನು ಸಂಗ್ರಹಿಸಲು 24 ಗಂಟೆ ಕಾರ್ಯನಿರ್ವಹಿಸುವ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದೆ.
7) ಕಾಡಾನೆ ಹಾವಳಿ ಹೆಚ್ಚಾಗಿರುವ ಪ್ರದೇಶಗಳಲ್ಲಿ ಆನೆ ಗುಂಪುಗಳ ಒಂದೊಂದು ಗುಂಪಿನ ಒಂದು ವಯಸ್ಕ ಹೆಣ್ಣಾನೆಗೆ ರೇಡಿಯೋ ಕಾಲರ್ ಅಳವಡಿಸಿ, 24 ಗಂಟೆ ಆನೆ ಹಿಂಡಿನ ಚಲನ-ವಲನಗಳ ಮೇಲೆ ನಿಗಾ ವಹಿಸಿ, ಸದರಿ ಆನೆಗಳು ಯಾವ ಯಾವ ಪ್ರದೇಶಗಳಲ್ಲಿ ಚಲಿಸುತ್ತಿವೆ ಎಂಬ ವಿಷಯವನ್ನು ಎಸ್.ಎಂ.ಎಸ್. ಮುಖಾಂತರ ಸ್ಥಳೀಯ ಜನರಿಗೆ ಆಗಿಂದಾಗ್ಗೆ ಮಾಹಿತಿ ನೀಡಲಾಗುತ್ತಿದೆ.
8) ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ ಕಾಡಾನೆಗಳನ್ನು ಸೆರೆಹಿಡಿದು ಆಗಿಂದಾಗ್ಗೆ ಆನೆ ಶಿಬಿರಗಳಿಗೆ ಸ್ಥಳಾಂತರಿಸಲಾಗಿರುತ್ತದೆ.
9) ರೈತರಿಗೆ ಸೋಲಾರ್ ಬೇಲಿ ನಿರ್ಮಾಣಕ್ಕೆ ಶೇ 50ರಷ್ಟು ಧನ ಸಹಾಯವನ್ನು ಇಲಾಖೆಯಿಂದ ನೀಡಲಾಗುತ್ತಿದೆ.

ಸಂಖ್ಯೆ: ಅಪಜೀ 35 ಎಫ್ ಡಬ್ಲ್ಯೂ ಎಲ್ 2020

(ಆನಂದ್ ಸಿಂಗ್)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು